ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಹದಿನಾರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 09ನೇ ಫೆಬ್ರವರಿ, 2018

(ಸಮಯ: ಬೆಳಿಗ್ಗೆ 10.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:-**

1) ದಿನಾಂಕ: 08.02.2018ರ ಮೂರನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ರಾಜೀವ್. ಪಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ. 36(111)	:	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು
2) ದಿನಾಂಕ: 08.02.2018ರ ಮೂರನೇ ಪಟ್ಟಿಯಿಂದ ತಡೆಹಿಡಿಯಲಾದ ಡಾ॥ ಸುಧಾಕರ್. ಕೆ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ. 41(440)	:	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು
3) ದಿನಾಂಕ: 08.02.2018ರ ಮೂರನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಕೃಷ್ಣಾರೆಡ್ಡಿ. ಎಂ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ. 44(432)	:	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

2. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

1) **ಶ್ರೀ ಬಿ. ರಮಾನಾಥ ರೈ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) ಅವರು :–**
   ಅ) 2018ನೇ ಸಾಲಿನ ಕರ್ನಾಟಕ ಮರಗಳ ಸಂರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2) **ಶ್ರೀ ಬಸವರಾಜ ರಾಯರೆಡ್ಡಿ (ಉನ್ನತ ಶಿಕ್ಷಣ ಸಚಿವರು) ಅವರು :–**
   ಅ) 2018ನೇ ಸಾಲಿನ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3) **ಶ್ರೀ ಬಸವರಾಜ ರಾಯರೆಡ್ಡಿ (ಉನ್ನತ ಶಿಕ್ಷಣ ಸಚಿವರು) ಅವರು :–**
   ಅ) 2018ನೇ ಸಾಲಿನ ಖಾಜಾ ಬಂದಾನವಾಜ್ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಎನ್.ಹೆಚ್. ಕೋನರೆಡ್ಡಿ, ಕೆ. ಗೋಪಾಲಯ್ಯ ಮತ್ತು ಮಧು ಬಂಗಾರಪ್ಪ ಇವರುಗಳು** – ಕಳಸಾ ಬಂಡೂರಿ ಮಹದಾಯಿ ಯೋಜನೆಯ ಜಾರಿಗಾಗಿ ರೈತರು ಹೋರಾಟ ನಡೆಸುತ್ತಿದ್ದು ಯೋಜನೆ ಅನುಷ್ಠಾನಗೊಳಿಸಲು ಮೂರು ರಾಜ್ಯಗಳ ಮುಖ್ಯಮಂತ್ರಿಗಳ ಜೊತೆ ಚರ್ಚಿಸುವ ಕುರಿತು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಜಗದೀಶ್ ಶೆಟ್ಟರ, ಬಿ.ಎನ್.ವಿಜಯಕುಮಾರ್, ಶಿವನಗೌಡ ನಾಯಕ್, ಡಿ.ಎನ್. ಜೀವರಾಜ್ ಮತ್ತು ಸಿ.ಟಿ. ರವಿ ಇವರುಗಳು** – ರಾಜ್ಯದಲ್ಲಿ ರೈತರು 2017–18ನೇ ಸಾಲಿನ ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ರೈತರಿಂದ ವಿಮೆ ಹಣ ಪಡೆದಿದ್ದು, ಪ್ರಸ್ತುತ ಸಂಕಷ್ಟದಲ್ಲಿರುವ ರೈತರಿಗೆ ಬೆಳೆ ವಿಮೆ ಪರಿಹಾರ ಒದಗಿಸುವ ಬಗ್ಗೆ

ಹಾಗೂ

ಶ್ರೀ ಬಸವರಾಜ ಎಸ್. ಬೊಮ್ಮಾಯಿ ಇವರು – ಹಾವೇರಿ ಜಿಲ್ಲೆಯ ರೈತರಿಗೆ ಭತ್ತದ ಬೆಳೆಯ ವಿಮೆ ಹಣ ಪಾವತಿಯಾಗದಿರುವ ಬಗ್ಗೆ ಪ್ರತಿಭಟನೆ ಮಾಡುತ್ತಿದ್ದು, ಪ್ರತಿಭಟನಾನಿರತ ರೈತರನ್ನು ವಿನಾಕಾರಣ ಬಂಧಿಸುತ್ತಿದ್ದು, ಬೆಳೆ ವಿಮೆ ಪರಿಹಾರ ಹಣವನ್ನು ಕೂಡಲೇ ಬಿಡುಗಡೆ ಮಾಡುವಂತೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಹೆಚ್.ಡಿ ಕುಮಾರಸ್ವಾಮಿ, ಹೆಚ್. ಡಿ ರೇವಣ್ಣ, ಕೆ.ಎಂ. ಶಿವಲಿಂಗೇಗೌಡ, ಸಿ.ಬಿ. ಸುರೇಶ್‌ಬಾಬು ಮತ್ತು ಇತರರು** – ಹಾಸನ ಜಿಲ್ಲೆಯ ಹೇಮಾವತಿ, ಯಗಚಿ ಮತ್ತು ವಾಟೇಹೊಳೆ ಜಲಾಶಯಗಳ ವ್ಯಾಪ್ತಿಯಲ್ಲಿ ಸಮರ್ಪಕವಾಗಿ ನೀರನ್ನು ಹರಿಸದಿರುವುದರಿಂದ ಬೆಳೆ ನಾಶವಾಗಿದ್ದು, ಅಲ್ಲಿನ ರೈತರಿಗೆ ಪರಿಹಾರ ನೀಡುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಜಗದೀಶ್ ಶೆಟ್ಟರ ಇವರು** – ಮೈಸೂರು ಕಾಗದ ಕಾರ್ಖಾನೆಯ ಅರಣ್ಯ ವಿಭಾಗದಲ್ಲಿ 30 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ 400 ಜನ ದಿನಗೂಲಿ ನೌಕರರನ್ನು "ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012" ರ ವ್ಯಾಪ್ತಿಗೆ ತಂದು ಅವರಿಗೆ ನ್ಯಾಯ ದೊರಕಿಸಿಕೊಡುವಂತೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

2) **ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ ಮತ್ತು ಕೆ.ಎಂ. ಶಿವಲಿಂಗೇಗೌಡ ಇವರುಗಳು** – ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಹಿರೀಸಾವೆ – ಶನಿವಾರಸಂತೆ ರಾಜ್ಯ ಹೆದ್ದಾರಿ 8ರಲ್ಲಿ ಆಶ್ರಯ ನಿವೇಶನಕ್ಕೆ ಕಾಯ್ದಿರಿಸಿರುವ ಜಾಗವನ್ನು ಅಕ್ರಮ ಒತ್ತುವರಿ ಮಾಡಿಕೊಂಡು ವಾಣಿಜ್ಯ ಕಟ್ಟಡಗಳನ್ನು ಅಕ್ರಮವಾಗಿ ನಿರ್ಮಿಸಿಕೊಂಡಿರುವವರ ವಿರುದ್ಧ ಕಾನೂನು ರೀತ್ಯಾ ಕ್ರಮ ಜರುಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ದಾವಣಗೆರೆ ಜಿಲ್ಲೆಯ ಜಿಲ್ಲಾ ಕಾರಗೃಹವನ್ನು ಸ್ಥಳಾಂತರ ಮಾಡುವ ಉದ್ದೇಶದಿಂದ ಹರಿಹರ ತಾಲ್ಲೂಕಿನ ಕೊಂಡಜ್ಜಿಯಲ್ಲಿ ಭೂಮಿ ನೀಡಲಾಗಿದ್ದರೂ ಇದುವರೆವಿಗೂ ಕಾರಗೃಹ ಸ್ಥಳಾಂತರ ಮಾಡದೇ ಇರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

4) **ಶ್ರೀ ಸಿ.ಎನ್. ಬಾಲಕೃಷ್ಣ ಇವರು** – ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕು ವ್ಯಾಪ್ತಿಯಲ್ಲಿ ವಿದ್ಯುತ್ ಪರಿವರ್ತಕಗಳು ಸುಟ್ಟುಹೋಗಿ ಒಂದು ತಿಂಗಳು ಕಳೆದರೂ ಬದಲಿ ವಿದ್ಯುತ್ ಪರಿವರ್ತಕಗಳನ್ನು ಅಳವಡಿಸದೇ ಇರುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

5) **ಶ್ರೀ ಜಗದೀಶ್ ಶೆಟ್ಟರ ಇವರು** – ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ವೇತನ ಬಡ್ತಿಗಳನ್ನು ಕಡಿತ ಮಾಡುವ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯವರು ಹೊರಡಿಸಿರುವ ಅದೇಶವನ್ನು ರದ್ದು ಪಡಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

6) **ಶ್ರೀ ಎಸ್. ಆರ್. ವಿಶ್ವನಾಥ್ ಇವರು** – ಬೆಂಗಳೂರು ಈಶಾನ್ಯ ವಿಭಾಗದ ಉಪ ಪೋಲಿಸ್ ಆಯುಕ್ತರ ಕಛೇರಿಯನ್ನು ಯಲಹಂಕ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅಲ್ಲಾಳಸಂದ್ರ ಗ್ರಾಮದಲ್ಲಿ ಮೀಸಲಿಟ್ಟಿರುವ ಸರ್ಕಾರಿ ಜಮೀನಿನಲ್ಲಿ ನಿರ್ಮಿಸಲು ಕ್ರಮಕೈಗೊಳ್ಳುವ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

7) **ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ ಮತ್ತು ಹೆಚ್.ಡಿ. ರೇವಣ್ಣ ಇವರುಗಳು** – ಹಾಸನ ಜಿಲ್ಲೆ, ಹೊಳೆನರಸೀಪುರ ಪಟ್ಟಣದಲ್ಲಿರುವ ಸಾರ್ವಜನಿಕ ಆಸ್ಪತ್ರೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

8) **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಕೆ.ಎಂ. ಶಿವಲಿಂಗೇಗೌಡ ಮತ್ತು ಸಿ.ಎನ್. ಬಾಲಕೃಷ್ಣ ಇವರುಗಳು** – ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಕಟ್ಟೆಬೆಳಗುಲಿ ಗ್ರಾಮದ ಶ್ರೀರಾಮದೇವರ ಅಣೆಕಟ್ಟು ಸುಮಾರು 148 ವರ್ಷಗಳಷ್ಟು ಹಳೆಯದಾಗಿದ್ದು, ಇದಕ್ಕೆ ಪರ್ಯಾಯವಾಗಿ ಹೊಸ ಅಣೆಕಟ್ಟನ್ನು ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

9) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ದಾವಣಗೆರೆ ಜಿಲ್ಲೆ ಹರಿಹರದ ತುಂಗಭದ್ರ ನದಿಗೆ ಅಡ್ಡಲಾಗಿ ನಿರ್ಮಿಸುತ್ತಿರುವ ಸೇತುವೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

10) **ಶ್ರೀ ಸಿ.ಎನ್. ಬಾಲಕೃಷ್ಣ ಇವರು** – ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕು ಜನಿವಾರ ಅಮಾನಿಕೆರೆಯಿಂದ ತಾಲ್ಲೂಕಿನ ಇತರೆ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗಾಗಿ ವಶಪಡಿಸಿಕೊಳ್ಳಲಾದ ಜಮೀನುಗಳಿಗೆ ಭೂ ಪರಿಹಾರ ನೀಡದೇ ಇರುವುದರಿಂದ ರೈತರಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

11) **ಶ್ರೀ ಜಗದೀಶ್ ಶೆಟ್ಟರ ಇವರು** – ಹುಬ್ಬಳಿ – ಧಾರವಾಡ ಮಹಾನಗರ ಪಾಲಿಕೆಯಲ್ಲಿನ ನಿವೃತ್ತ ಅಧಿಕಾರಿ – ನೌಕರರುಗಳಿಗೆ, 2013–14 ರಿಂದ 2017–18ನೇ ಸಾಲಿನ ವರೆಗೆ ಪಿಂಚಣಿ ಹಣವನ್ನು ಪಾವತಿಸದೇ ಇರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

12) **ಶ್ರೀ ಎಸ್.ಟಿ. ಸೋಮಶೇಖರ್ ಇವರು** – ಬೆಂಗಳೂರು ದಕ್ಷಿಣ ತಾಲ್ಲೂಕು ಚಿಕ್ಕಲಿಂಗಶಾಸ್ತ್ರಿ ಕೆರೆ ಏರಿಯಲ್ಲಿ ಕಂದಕ ಉಂಟಾಗಿ ಏರಿಯು ಸೀಳು ಬಿಟ್ಟಿರುವುದರಿಂದ ನೀರು ಜಿನುಗುತ್ತಿದ್ದು ಏರಿ ಒಡೆಯುವ ಸಂಭವವಿರುವುದರಿಂದ ಏರಿಯ ದುರಸ್ಥಿ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳ ಮತ್ತು ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

13) **ಶ್ರೀಯುತರುಗಳಾದ ದೊಡ್ಡನಗೌಡ ಹೆಚ್. ಪಾಟೀಲ ಮತ್ತು ಬಿ.ಆರ್. ಪಾಟೀಲ ಇವರುಗಳು** – ಕುಷ್ಟಗಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಸ್ಥಗಿತಗೊಂಡಿರುವ ತೊಗರಿ ಖರೀದಿ ಕೇಂದ್ರಗಳನ್ನು ಪುನರ್ ಆರಂಭಿಸಿ ತೊಗರಿ ಖರೀದಿಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

14) **ಶ್ರೀ ಸಿ.ಟಿ. ರವಿ ಇವರು** – ಚಿಕ್ಕಮಗಳೂರು ಜಿಲ್ಲೆಯಲ್ಲಿ 2016–17ನೇ ಸಾಲಿನಲ್ಲಿ ಬೆಳೆ ವಿಮೆ ಕಂತು ಪಾವತಿಸಿರುವ ರೈತರಿಗೆ ಇದುವರೆವಿಗೂ ಬೆಳೆ ವಿಮೆ ಪಾವತಿಯಾಗದೇ ಇರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

15) **ಶ್ರೀ ಎನ್.ಹೆಚ್. ಕೋನರೆಡ್ಡಿ ಇವರು** – ಧಾರವಾಡ ಜಿಲ್ಲೆಯ ನವಲಗುಂದ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಆರೇಕುರಹಟ್ಟಿ ಗ್ರಾಮ, ಡಾಟನಾಳ, ಅಮರಗೊಳ, ಬಸಪೂರ ಹಾಗೂ ಮಣಕವಾಡ ಗ್ರಾಮಗಳನ್ನು ನೂತನ ಗ್ರಾಮ ಪಂಚಾಯಿತಿ ಎಂದು ಘೋಷಣೆ ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm